ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 12–10–2018**

**ಪತ್ರಿಕಾ ಪ್ರಕಟಣೆ**

**ಸಂಖ್ಯೆ:1144/1243**

# ನವೆಂಬರ್ 14 ರಿಂದ 20 ರವರೆಗೆ 65ನೇ ಸಹಕಾರಿ ಸಪ್ತಾಹ ಆಚರಣೆ

**–ಸಚಿವ ಬಂಡೆಪ್ಪ ಖಾಶೆಂಪೂರ್**

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಸಹಕಾರಿ ಯೂನಿಯನ್ ಮಾರ್ಗಸೂಚಿಯಂತೆ ರಾಜ್ಯದಲ್ಲಿ ನವೆಂಬರ್ 14 ರಿಂದ 20 ರವರೆಗೆ 65ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಆಚರಿಸಲಾಗುವುದು ಎಂದು ಸಹಕಾರ ಸಚಿವ ಬಂಡೆಪ್ಪ ಖಾಶೆಂಪೂರ್ ಅವರು ತಿಳಿಸಿದರು.

ವಿಕಾಸ ಸೌಧದಲ್ಲಿ ಇಂದು ನಡೆದ ಸಹಕಾರ ಸಪ್ತಾಹದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಹಕಾರ ಸಚಿವರು "ಗ್ರಾಮೀಣ ಸಮೃದ್ಧಿಗಾಗಿ ಸಹಕಾರ ಸಂಸ್ಥೆಗಳ ಮೂಲಕ ಉತ್ತಮ ಆಡಳಿತ ಮತ್ತು ಸರ್ವರನ್ನೊಗಳೊಂಡ(ಅಂತರ್ಗತ) ಬೆಳವಣಿಗೆ" ಘೋಷಣೆಯೊಂದಿಗೆ ಏಳು ದಿನಗಳು ನಡೆಯುವ ಸಹಕಾರ ಸಪ್ತಾಹ ಈ ನವೆಂಬರ್ 14 ರಂದು ಬೀದರ್ ಜಿಲ್ಲೆಯಲ್ಲಿ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ಸಚಿವರು ತಿಳಿಸಿದರು.

ರಾಜ್ಯದ ಎಲ್ಲಾ ವಿಭಾಗೀಯ ಮಟ್ಟದಲ್ಲಿ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮ ಆಚರಣೆ ಮಾಡಲು ಸಭೆಯು ನಿರ್ಣಯ ಕೈಗೊಂಡಿದ್ದು ನವೆಂಬರ್ 15 ರಂದು ಉತ್ತರ

ಕನ್ನಡ ಜಿಲ್ಲೆಯ ಶಿರಸಿಯಲ್ಲಿ, ನವೆಂಬರ್ 16 ರಂದು ಬೆಂಗಳೂರಿನಲ್ಲಿ, ನವೆಂಬರ್ 17 ರಂದು ತುಮಕೂರಿನಲ್ಲಿ, ನವೆಂಬರ್ 18 ರಂದು ಹಾವೇರಿಯಲ್ಲಿ, ನವೆಂಬರ್ 19 ರಂದು ರಾಯಚೂರಿನಲ್ಲಿ ಸಪ್ತಾಹ ಕಾರ್ಯಕ್ರಮಗಳು ನಡೆಯಲಿದ್ದು, ನವೆಂಬರ್ 20 ರಂದು ಶಿವಮೊಗ್ಗದಲ್ಲಿ ಮುಕ್ತಾಯ ಸಮಾರಂಭ ಕಾರ್ಯಕ್ರಮ ಏರ್ಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಹಕಾರಿ ಸಪ್ತಾಹದ ಅಂಗವಾಗಿ ಸಹಕಾರ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿದ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿಯನ್ನು ಬೀದರ್‌ನಲ್ಲಿ ನಡೆಯುವ ಸಮಾರಂಭದಲ್ಲಿ ಮುಖ್ಯಮಂತ್ರಿಯವರು ನೀಡಿ ಗೌರವಿಸಲಿದ್ದಾರೆ.

ಈ ಬಾರಿ ಗ್ರಾಮೀಣ ಭಾಗಗಳಲ್ಲಿ ಅರ್ಥಪೂರ್ಣವಾಗಿ ಸಹಕಾರ ಸಪ್ತಾಹ ಕಾರ್ಯಕ್ರಮ ಏರ್ಪಡಿಸುವಂತೆ ತಿಳಿಸಲಾಗಿದ್ದು ಹೆಚ್ಚಿನ ಮಟ್ಟದಲ್ಲಿ ಗ್ರಾಮೀಣ ಜನರು ಹಾಗೂ ಯುವ ಸಮುದಾಯಕ್ಕೆ ಈ ಸಪ್ತಾಹದ ಉಪಯೋಗ ಆಗುವಂತೆ ಮುನ್ನೆಚ್ಚರಿಕ ವಹಿಸಲಾಗುವುದು.

65ನೇ ಅಖಿಲ ಭಾರತ ಸಹಕಾರ ಸಪ್ತಾಹದ ಮುಖ್ಯ ಧ್ಯೇಯವು "ಗ್ರಾಮೀಣ ಸಮೃದ್ಧಿಗಾಗಿ ಸಹಕಾರ ಸಂಸ್ಥೆಗಳ ಮೂಲಕ ಉತ್ತಮ ಆಡಳಿತ ಮತ್ತು ಸರ್ವರನ್ನೊಳಗೊಂಡ (ಅಂತರ್ಗತ) ಬೆಳವಣಿಗೆ" "Inclusive Growth and Good Governance through Cooperatives for Rural Prosperity" ಎಂಬುದಾಗಿ ಘೋಷಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಈ 7 ದಿನಗಳ ಅವಧಿಯಲ್ಲಿ ಸಹಕಾರ ಸಪ್ತಾಹವನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಆಚರಿಸಲು ಕಾರ್ಯಕ್ರಮ ರೂಪಿಸಲಾಗಿದ್ದು, ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳದ ನೇತೃತ್ವದಲ್ಲಿ ಎಲ್ಲಾ ರಾಜ್ಯ ಮಟ್ಟದ ಸಹಕಾರ ಮಹಾ ಮಂಡಳಗಳು/ ಶ್ರಂಗ ಸಂಸ್ಥೆಗಳು/ಸಹಕಾರ ಇಲಾಖೆ ಹಾಗೂ ಸ್ಥಳೀಯ ಸಹಕಾರಿ ಸಂಸ್ಥೆಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಒಟ್ಟು 27 ಸಾವಿರ ಸಹಕಾರ ಸಂಘಗಳಿದ್ದು, ಇದರಲ್ಲಿ ಸುಮಾರು 18 ಸಾವಿರ ಹಾಲು ಉತ್ಪಾದಕರ ಸಂಘಗಳು, 5300 ಪ್ರಾಥಮಿಕ ಕೃಷಿ ಸಹಕಾರ ಸಂಘಗಳು ಸೇರಿವೆ. ಎಲ್ಲಾ ಸಹಕಾರ ಸಂಘಗಳನ್ನು ರಾಷ್ಟ್ರೀಯ ಸಹಕಾರ ಸಪ್ತಾಹದಲ್ಲಿ

ಪಾಲ್ಗೊಳ್ಳುವಂತೆ ಸೂಚಿಸಲಾಗುವುದು ಹಾಗೂ ರಾಜ್ಯದ ಆಯ್ದ ಭಾಗಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಆಯಾ ಭಾಗದ ಶಾಸಕರು ಹಾಗೂ ಸಚಿವರು ಪಾಲ್ಗೊಳ್ಳುವಂತೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ರಾಜ್ಯದಲ್ಲಿನ ಸಮಿಶ್ರ ಸರ್ಕಾರ ರೈತರ, ಬಡವರ ಪರ ಕೆಲಸ ಮಾಡುತ್ತಿದ್ದು ಸಹಕಾರಿ ಬ್ಯಾಂಕಿನ 9448 ಕೋಟಿ ರೂಪಾಯಿಗಳ ಸಾಲಮನ್ನಾ ಮಾಡಿದೆ ಇದರಿಂದ ಸುಮಾರು 22 ಲಕ್ಷ ರೈತರಿಗೆ ಅನುಕೂಲವಾಗಲಿದೆ.

ಸಹಕಾರಿಗಳು ಹಾಗೂ ಶಾಸಕರು ಆದ ಹೆಚ್.ಟಿ. ಸೋಮಶೇಖರ, ವಿಧಾನ ಪರಿಷತ್ತಿನ ಸದಸ್ಯರಾದ ರಮೇಶ್ ಬಾಬು ಹಿರಿಯ ಅಧಿಕಾರಿಗಳಾದ ರಾಕೇಶ್‌ಸಿಂಗ್ ಸೇರಿದಂತೆ ರಾಜ್ಯಾದ್ಯಂತ ಆಗಮಿಸಿದ್ದ ಹಿರಿಯ ಸಹಕಾರಿಗಳು. ಅಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಹಾಜರಿದ್ದರು.

**ಸಂಖ್ಯೆ:1145/1245**

## ರಾಷ್ಟ್ರೀಯ ಚಂಡಮಾರುತ ಅಪಾಯ ಉಪಶಮನ ಯೋಜನೆ ಸಿದ್ಧ

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ರಾಜ್ಯದ ಪಶ್ಚಿಮ ಕರಾವಳಿಯ ಸುಮಾರು 321 ಕಿ.ಮೀ ವಿಸ್ತಾರವಿರುವ ಕಡಲ ತೀರದಲ್ಲಿ ರಾಷ್ಟ್ರೀಯ ಚಂಡಮಾರುತ ಅಪಾಯ ಉಪಶಮನ ಯೋಜನೆಯು ಕೇಂದ್ರ ಸರ್ಕಾರ ಹಾಗೂ ವಿಶ್ವಬ್ಯಾಂಕ್ ನೆರವಿನಿಂದ ಅನುಷ್ಠಾನ ಮಾಡಲು ಯೋಜನೆಯನ್ನು ಸಿದ್ಧಪಡಿಸಲಾಗಿದೆ ಎಂದು ಕಂದಾಯ ಇಲಾಖೆಯ ವಿಪತ್ತು ನಿರ್ವಹಣೆ ವಿಭಾಗದ ಉಪ ಕಾರ್ಯದರ್ಶಿ ಟಿ. ನಾರಾಯಣಪ್ಪ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಂದಾಯ ಇಲಾಖೆ ಇಂದು ಏರ್ಪಡಿಸಿದ್ದ 'ಚಂಡಮಾರುತ ಮತ್ತು ಪ್ರವಾಹ ವಿಪತ್ತು ನಿರ್ವಹಣೆ' ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದು ಮಾತನಾಡಿದ ಅವರು ರಾಜ್ಯ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಕಾರವಾರ ಜಿಲ್ಲೆಗಳಲ್ಲಿ ಈಗಾಗಲೇ ಈ ಯೋಜನೆಯಡಿ ಹಲವು ಕಾರ್ಯಕ್ರಮಗಳು ಪ್ರಗತಿಯಲ್ಲಿವೆ ಎಂದು ಹೇಳಿದರು.

ಮೂರು ಜಿಲ್ಲೆಗಳಿಗೆ ಸಂಬಂಧಿಸಿದಂತೆ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಈ ಯೋಜನೆಯ ಯಶಸ್ವಿ ನಿರ್ವಹಣೆಗಾಗಿ ತರಬೇತಿ ಏರ್ಪಡಿಸಲಾಗಿದೆ.

ರಾಜ್ಯದಲ್ಲಿ ಮಾನವ ನಿರ್ಮಿತ ಬರ ಮತ್ತು ನೆರೆಯಿಂದ ಹೆಚ್ಚು ವಿಪತ್ತುಗಳು ಸಂಭವಿಸುತ್ತವೆ ಎಂದು ತಿಳಿಸಿದ ವಿಪತ್ತು ನಿರ್ವಾಹಣಾ ತಜ್ಞರಾದ ಡಾ. ವಿಶ್ವನಾಥ್ ಅವರು ಪ್ರಾಕೃತಿಕದತ್ತವಾಗಿರುವ ರಾಜ್ಯದಲ್ಲಿ ವಿಪತ್ತುಗಳು ಸಂಭವಿಸಿರುವ ಉದಾಹರಣೆಗಳಿವೆ ಎಂದರು.

ರಾಜ್ಯ ಸರ್ಕಾರ ವಿಪತ್ತು ನಿರ್ವಹಣೆ ಯೋಜನೆಯನ್ನು ಸಿದ್ದಪಡಿಸಿ ಎರಡು ಬಾರಿ ಪುನರ್ ಪರಿಶೀಲನೆ ನಡೆಸಿದೆ, ನಮ್ಮ ರಾಜ್ಯದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ವಿಪತ್ತು ಪ್ರಾಧಿಕಾರ ರಚನೆಯಾಗಿದ್ದು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ವಿಪತ್ತು ನಿರ್ವಾಹಣೆ ಪ್ರಾಧಿಕಾರದ ಮುಖ್ಯಸ್ಥರಾಗಿದ್ದಾರೆ ಎಂದರು.

ವಿಪತ್ತು ನಿರ್ವಹಣ ತಜ್ಞರುಗಳಾದ ಡಾ. ಶ್ರೀನಿವಾಸ ರೆಡ್ಡಿ, ಡಾ. ರಾಜಕುಮಾರ್ ಪೂಜಾರ್, ಗವಾಸ್ಕರ್ ಹಾಗೂ ಇತರರು ವಿಪತ್ತು ನಿರ್ವಹಣೆ ಬಗ್ಗೆ ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

**ಸಂಖ್ಯೆ:1146/1246**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 14-10-2018** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ

ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**ಸಂಖ್ಯೆ:1148/1248**

# ತಿರಸ್ಕೃತ ಐಟಿಐ ಕಾಲೇಜುಗಳ ಪಟ್ಟಿ
# ಪ್ರವೇಶ ಪ್ರಕ್ರಿಯೆ ಮಾಡದಿರಲು ಸೂಚನೆ

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ 2018 ನೇ ಸಾಲಿಗೆ ರಾಜ್ಯ ವೃತ್ತಿ ಶಿಕ್ಷಣ ಪರಿಷತ್ (SCVT) ಅಡಿಯಲ್ಲಿ ಸಂಸ್ಥೆಗಳಿಗೆ ವೃತ್ತಿ/ಘಟಕಗಳ

ಸಂಯೋಜನೆಯನ್ನು ತಿರಸ್ಕರಿಸಿರುವುದರಿಂದ ಸದರಿ ಸಾಲಿಗೆ ಪ್ರವೇಶ ಪ್ರಕ್ರಿಯೆ ಮಾಡದೇ ಇರಲು ಸೂಚಿಸಲಾಗಿದೆ.

ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಹರಿಪ್ರಿಯ ಪ್ರೈ. ಐಟಿಐ ಹಾಗೂ ಬಿ.ವಿ.ಎಸ್., ಐಟಿಐ, ತುಮಕೂರಿನ ದಾಬಸ್‌ಪೇಟೆಯಲ್ಲಿರುವ ಮಾರುತಿ ಪ್ರೈ. ಐಟಿಐ, ಶಿರಾ ತಾಲ್ಲೂಕಿನ ತಾವರಕೆರೆಯಲ್ಲಿರುವ ಬಾಲಾಜಿ ಪ್ರೈ, ಐಟಿಐ, ಮಧುಗಿರಿ ತಾಲ್ಲೂಕಿನ ಶ್ರೀ ದತ್ತಾತ್ರೇಯ ಪ್ರೈ. ಐಟಿಐ.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ಶ್ರೀ ನಮ್ಮಕೆರೆಮಲ್ಲೈ ಸಿದ್ದೇಶ್ವರ ಪ್ರೈ. ಐಟಿಐ, ಹಿರಿಯೂರು ತಾಲ್ಲೂಕಿನ ಎಸ್.ಎಸ್. ಪ್ರೈ. ಐಟಿಐ.

ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಶ್ರೀ ರಾಮಲಿಂಗೇಶ್ವರ ಪ್ರೈ. ಐಟಿಐ. ಕೈಗಾರಿಕಾ ತರಬೇತಿ ಸಂಸ್ಥೆಗಳು ಒಳಪಟ್ಟಿವೆ.

ಒಂದು ವೇಳೆ ಪ್ರವೇಶ ಮಾಡಿಕೊಂಡಲ್ಲಿ ಮುಂದಿನ ಆಗಹೋಗುಗಳಿಗೆ ಸಂಸ್ಥೆಯವರೆ ಪೂರ್ಣ ಜವಾಬ್ದಾರರಾಗಿರುತ್ತಾರೆಂದು ಮತ್ತು ಸಂಸ್ಥೆಗಳಿಗೆ ವೃತ್ತಿ/ಘಟಕಗಳ ಸಂಯೋಜನೆಯನ್ನು ತಿರಸ್ಕರಿಸಿರುವುದರಿಂದ ಸದರಿ ಸಾಲಿಗೆ ಪ್ರವೇಶವನ್ನು ಪಡೆಯಬಾರದೆಂದು ತಿಳಿಸಲಾಗಿದೆ. ಒಂದು ವೇಳೆ ಪ್ರವೇಶ ಪಡೆದಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳು ಮತ್ತು ಪೋಷಕರೆ ಸಂಪೂರ್ಣ ಜವಾಬ್ದಾರರಾಗಿರುತ್ತಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1149/1249**

## ನಿವೃತ್ತ ಸೇನಾಧಿಕಾರಿಗಳ ವೆಬ್‌ಸೈಟ್ ಪ್ರಾರಂಭ

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ನಿವೃತ್ತ ಸೇನಾಧಿಕಾರಿಗಳು ಹಾಗೂ ಅವರ ಕುಟುಂಬದವರ ಕುಂದು ಕೊರತೆಗಳನ್ನು ಆಲಿಸಲು, ಇತ್ತೀಚಿನ ಬೆಳವಣಿಗೆಗಳ ಮಾಹಿತಿ ಪಡೆಯಲು ಅವರ ವಿವರಗಳನ್ನು ಗಣಕೀಕರಣಗೊಳಿಸುವ ಸಂಬಂಧ ಎಜಿ/ಎಂಪಿ 5 ಮತ್ತು 6 ಇವರು ವೆಬ್‌ಸೈಟ್‌ನ್ನು ಪ್ರಾರಂಭಿಸಿರುತ್ತಾರೆ.

ಭೂಸೇನಾ ಪಡೆಯ ಎಲ್ಲಾ ಸೇವಾನಿರತ ಹಾಗೂ ನಿವೃತ್ತ ಸೇನಾಧಿಕಾರಿಗಳು ತಮ್ಮ ಹೆಸರನ್ನು ನೋಂದಾಯಿಸಿ ಇದರ ಸದುಪಯೋಗ ಪಡೆಯುವಂತೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1150/1250**

# Retired Officers Digital Records Archive

Bengaluru, Oct 12 (Karnataka Information)

AG/MP 5&6, New Delhi has launched a Website https://rodra.gov.in with a view to develop an interface between veterans and MP 5&6. The veteran Officer/family pensioners can address their grievances related to pension and also to update them on the relevant policies. All the veteran Army Officers are requested to register on RODRA and avail the facility says an official Press Release.

**ಸಂಖ್ಯೆ:1151/1251**

# ಸ್ಪರ್ಧಾತ್ಮಕ ಪರೀಕ್ಷೆ ಫಲಿತಾಂಶ ವೆಬ್‌ಸೈಟ್‌ನಲ್ಲಿ ಪ್ರಕಟ

ಬೆಂಗಳೂರು, ಅಕ್ಟೋಬರ್ 12, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ತಾಂತ್ರಿಕೇತರ ಗ್ರೂಪ್ 'ಸಿ' ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು 2017 ಜೂನ್ 4 ಮತ್ತು 11 ರಂದು ನಡೆಸಲಾಗಿದ್ದು, ಸದರಿ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳನ್ನು ಅಕ್ಟೋಬರ್ 6 ರಂದು ಆಯೋಗದ ವೆಬ್‌ಸೈಟ್ "http://kpsc.kar.nic.in/ಫಲಿತಾಂಶ" ನಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಅಯೋಗದ ಪ್ರಕಟಣೆ ತಿಳಿಸಿದೆ.